ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬಿಂ.ಮ.ಪಾ/ಮು.ಅ/ಯ.ವ/ತಾಂ.ಮ/500/17-18,

ಮುಖ್ಯ ಅಭಿಯಂತರರುರವರ ಕಛೇರಿ
ಬೃ.ಬೆಂ.ಮ.ಪಾ, ಯಲಹಂಕ ವಲಯ
ಬಳ್ಳಾರಿ ರಸ್ತೆ, ಬೆಂಗಳೂರು-92.
ದಿನಾಂಕ: 06.01.18

ತಾಂತ್ರಿಕ ಮಂಜೂರಾತಿ

ವಿಷಯ:- Providing LED Street light and Timers in main roads of Sector B in Ward No-04

ಉಲ್ಲೇಖ:- 1. ಮುಖ್ಯ ಆರ್ಥಿಕ ಅಧಿಕಾರಿಯವರ ಕಛೇರಿ ಕಾಮಗಾರಿ ಸಂಕೇತ:-004-18-000028.
2. ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವ/ಆ.ಅ/26/17-18
ದಿನಾಂಕ: 06.01.2018

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರು 2017-18 ನೇ ಸಾಲಿನ ಮಾನ್ಯ ಉಪ ಮಹಾ ಪೌರರು ಆಜ್ಞೆ ಮಾಡುವ ವಿಶೇಷ ಕಾಮಗಾರಿಗಳು ಪಿ-2178 ಲೆಕ್ಕ ಶೀರ್ಷಿಕೆ ಅಡಿಯಲ್ಲಿ, ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ.25.00** ಲಕ್ಷಗಳಿಗೆ ಪಿ.ಡಬ್ಲ್ಯುಡಿ. (ವಿದ್ಯುತ್) 2014-15 ಎಸ್ ಆರ್ ದರಗಳ ಹಾಗೂ ಅನುಮೋದಿತ ದರಗಳನ್ನು ಅಳವಡಿಸಿ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ:ಬಿಬಿಎಂಪಿ/ಕಾ.ಪಾ.ಅ/ಯ.ವ./ಆ.ಅ/26/17-18 ದಿನಾಂಕ: 06.1.18 ರಲ್ಲಿ ಆಡಳಿತಾತ್ಮಕ ಅನುಮೋದನೆ ಪಡೆದಿರುವ ಮೇರೆಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಮುಖ್ಯ ಅಭಿಯಂತರರು(ಯ.ವ) ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿಆರ್/394/16-17, ದಿನಾಂಕ:05-05-2016 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಹಾಗೂ ತಾಂತ್ರಿಕ ಮಂಜೂರಾತಿಯ ಪುಟ ಸಂಖ್ಯೆ:193-99 ಕ್ರ.ಸಂ.500 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:-

1. ಅಂದಾಜು ಪಟ್ಟಿಯ ಮೊತ್ತ ರೂ. 10.00 ಸಾವಿರಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
3. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ, ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು(ವಿ), ಯಲಹಂಕ ವಲಯ ರವರ ಮಾಹಿತಿಗಾಗಿ.